# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 156 |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 05.03.2025<br>(ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಕ್ಕು ಪತ್ರ ನೀಡಿರುವ ಜಾಗದಲ್ಲಿ ಇ-ಸ್ವತ್ತು ಸಮಸ್ಯೆಯಿಂದ ಹೊಸ ಮನೆಗಳಿಗೆ ನಂಬರ್ ನೀಡುವ ಸಮಯದಲ್ಲಿ ಅನೇಕ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ.<br><br>ಆದಾಗ್ಯೂ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹಕ್ಕು ಪತ್ರ ನೀಡಿರುವ ಈ ಕೆಳಕಂಡ ಕ್ರಮಬದ್ಧ ಆಸ್ತಿಗಳಿಗೆ ಸಂಬಂಧಿಸಿದಂತೆ ಆಸ್ತಿ ವಿವರವನ್ನು ನಮೂನೆ-9 ರಲ್ಲಿ ಹಾಗೂ ಆ ಆಸ್ತಿಯ ತೆರಿಗೆ ಬೇಡಿಕೆ, ವಸೂಲಾತಿ ಮತ್ತು ಬಾಕಿ ವಿವರಗಳನ್ನು ನಮೂನೆ 11 ಎ ರಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ತನ್ನ ಡಿಜಿಟಲ್ ಸಹಿಯ ಮೂಲಕ ವಿತರಿಸುವರು. |
| (ಆ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು) | 1. ಸರ್ಕಾರದ ವಸತಿ ಯೋಜನೆಗಳಾದ ಬಸವ ವಸತಿ, ಗ್ರಾಮೀಣ ಅಂಬೇಡ್ಕರ್ ಹಾಗೂ ಇಂದಿರಾ ಆವಾಸ್ ಯೋಜನೆಯಡಿ ಸೃಜಿಸಿರುವ ಆಸ್ತಿಗಳು.<br>2. ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಪ್ರಕರಣ 94ಸಿ / 94ಸಿಸಿ / 94ಡಿ ರಡಿಯಲ್ಲಿ ಮಂಜೂರಾದ ಆಸ್ತಿಗಳು,<br>3. ಕರ್ನಾಟಕ ಭೂ ಸುಧಾರಣಾ ಅಧಿನಿಯಮ, 1961 ರ ಪ್ರಕರಣ 38 ಎ ರಡಿಯಲ್ಲಿ ಮಂಜೂರಾದ ಆಸ್ತಿಗಳು. |

ಸಂಖ್ಯೆ: ಗ್ರಾಅಪ 159 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.